ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. ನಂ **1326/2019**

ಸಿ.ಡಬ್ಲೂ **-11** ಪಿ.ಡಬ್ಲೂ **-6**

ದಿಃ **03.10.2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ರಂಗಸ್ವಾಮಿ ಕೆ. |
| ತಂದೆಯ ಹೆಸರು | ನಿಂಗೇಗೌಡ |
| ವಯಸ್ಸು | ಸುಮಾರು **57** ವರ್ಷ |
| ಕೆಲಸ | ಎ.ಎಸ್.ಐ. |
| ವಾಸಸ್ಥಳ | ಪಿರಿಯಾಪಟ್ಟಣ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

**2016** ರಿಂದ ಆಗಸ್ಟ್ **2019** ರವರೆಗೆ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ**10.03.2023** ರಂದು ಠಾಣಾ ಪ್ರಭಾರದಲ್ಲಿದ್ದಾಗ ಹುಣಸೂರು ಸರ್ಕಾರಿ ಆಸ್ಪತ್ರೆಯಿಂದ ದೂರವಾಣಿ ಮುಖೇನ ಎಂ.ಎಲ್.ಸಿ ಆದ ಬಗ್ಗೆ ತಿಳಿಸಿರುತ್ತಾರೆ. ಹಾಗಾಗಿ ನಾನು ಆಸ್ಪತ್ರೆಗೆ ಭೇಟಿ ನೀಡಿ ಸಂಜೆ **6.30** ಗಂಟೆ ಸಮಯದಲ್ಲಿ ಚಾಸಾ-**1** ರವರ ಹೇಳಿಕೆ ದೂರನ್ನು ಪಡೆದು, ಠಾಣೆಗೆ ಬಂದು ಠಾಣಾ ಮೊ.ಸಂ.**63/2019** ರಂತೆ ಪ್ರಕರಣ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಹಾಗೂ ಮೇಲಧಿಕಾರಿಗಳಿಗೆ ಪ್ರ.ವ.ವ ವನ್ನು ಸಲ್ಲಿಸಿರುತ್ತೇನೆ. ಸಾಕ್ಷಿಗೆ ನಿಪಿ-**1** ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-**1**(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಪ್ರ.ವ.ವ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**6** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**6**(ಎ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಎಂ.ಎಲ್.ಸಿ ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-**7** ಎಂದು, ಸಾಕ್ಷಿಯ ಸಹಿಯನ್ನು ನಿಪಿ-**7**(ಎ) ಎಂದು ಗುರುತಿಸಲಾಯಿತು.

ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-12 ರವರು ಪಡೆದುಕೊಂಡಿರುತ್ತಾರೆ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ ಎಸ್.ಎಸ್.ಜಿ. ವಕೀಲರಿಂದಃ</u>

ಸಾಮಾನ್ಯವಾಗಿ ಗಾಯಳುವಿನ ಹೇಳಿಕೆಯನ್ನು ಪಡೆದುಕೊಳ್ಳುವ ಸಮಯದಲ್ಲಿ ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗೂ ಹೇಳಿಕೆ ಪಡೆಯಲಾಯಿತು ಎಂದು ನಮೂದಿಸಲಾಗುತ್ತದೆಂದರೆ ಸರಿ. ಪ್ರಸ್ತುತ ಪ್ರಕರಣದಲ್ಲಿ ಚಾಸಾ-1 ರವರ ಹೇಳಿಕೆಯನ್ನು 6.00 ರಿಂದ 6.45 ರವರೆಗೆ ಪಡೆದಿರುತ್ತೇನೆ. ನಿಪಿ-1 ರಲ್ಲಿ ಎಷ್ಟು ಗಂಟೆಯಿಂದ ಎಂದು ನಮೂದು ಇದೆ ಎಂದರೆ ಸಾಕ್ಷಿ ಸಂಜೆ ಗಂಟೆಯಿಂದ ಸಂಜೆ 6.45 ಗಂಟೆ ಎಂದು ನಮೂದು ಇದೆ ಎಂದು ಹೇಳುತ್ತಾರೆ. ನಿಪಿ-1 ರಲ್ಲಿ ಎಷ್ಟು ಗಂಟೆಯಿಂದ ಎಂದು ನಮೂದಿಸಿಲ್ಲ ಎಂದರೆ ಸರಿ.

ಚಾಸಾ-1 ರವರ ಹೇಳಿಕೆಯನ್ನು ಠಾಣೆಯಲ್ಲೇ ಪಡೆದಿರುತ್ತೀರಿ ಎಂದರೆ ಸರಿಯಲ್ಲ. ಚಾಸಾ-1 ರವರ ಹೇಳಿಕೆಯನ್ನು ಠಾಣೆಯಲ್ಲಿ ಸೃಷ್ಟಿಮಾಡಿ, ಸುಳ್ಳು ಪ್ರಕರಣ ದಾಖಲಿಸಿರುತ್ತೀರಾ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು